ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ ಆನೇಕಲ್ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ-562106

ಸಂಖ್ಯೆ:ಅ1/ಖಾಪ್ರಾಶಾ/ಮಾನ್ಯತೆ/60/2020-21 ದಿನಾಂಕ: 07/10/2020

[ಆರ್.ಆರ್.ವಹಿ.ಕ್ರಮ:ಸಂಖ್ಯೆ:38/2020-21]

## ನಮೂನೆ-3 (ನಿಯಮ-7)

## ಕರ್ನಾಟಕ ಶಿಕ್ಷಣ ಕಾಯಿದೆ ನಿಯಮ 36(6)(ಬಿ) ರಂತೆ ಶಿಕ್ಷಣ ಸಂಸ್ಥೆಗಳ ಮಾನ್ಯತೆ ಪ್ರಮಾಣ ಪತ್ರ

*ಪ್ರೀಮಿಯರ್ ಲೋಟಸ್ ಫೌಂಡೇಷನ್ , ಸಂಖ್ಯೆ:19, 2 ನೇ ಕ್ರಾಸ್, ಮಾರುತಿ ಲೇಔಟ್, ಬಸ್ಸಾಪುರ, ಬೆಂಗಳೂರು* ಈ ಆಡಳಿತ ಮಂಡಳಿಯ ವತಿಯಿಂದ ನಡೆಯುತ್ತಿರುವ *ಕೆಳಕಂಡ ಪ್ರಾಥಮಿಕ ಶಾಲೆಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್-1-1995 ನಿಯಮ 36 [6] ರಂತೆ ಈ ದಿನ 07-10-2020 ರಂದು ಈ ಕೆಳಕಂಡ ಷರತ್ತುಗಳ ಮೇಲೆ ಅನುದಾನ ರಹಿತವಾಗಿ* ***[without Aid]*** *ಪ್ರಥಮ ಮಾನ್ಯತೆ / ಮಾನ್ಯತೆಯನ್ನು ನೀಡಿದೆ.*

| ನೊಂದಣಿ ಸಂಖ್ಯೆ ಮತ್ತು ಪ್ರಾಧಿಕಾರದ ಹೆಸರು | ಶಾಲೆಯ ಹೆಸರು ಮತ್ತು ವಿಳಾಸ | ಮಾನ್ಯತೆ ನೀಡಿರುವ ಮಾಧ್ಯಮ | ಮಾನ್ಯತೆ ನೀಡಿರುವ ತರಗತಿಗಳು | ಶಾಲೆಯ ವಿಧ [ಅನುದಾನ ರಹಿತ] | ಮಾನ್ಯತೆ ನೀಡಿದ ವರ್ಷ ಮತ್ತು ಅವಧಿ | ಮಾನ್ಯತೆ ನೀಡುವ ಬಗ್ಗೆ ಶಿಫಾರಸ್ಸು ಮಾಡಿದ ಅಧಿಕಾರಿಗಳ ಹೆಸರು ಮತ್ತು ಪದನಾಮ |
|---|---|---|---|---|---|---|
| ಉಪನಿರ್ದೇಶಕರು ಸಾಶಿಇ, ಬೆಂ.ದ.ಜಿಲ್ಲೆ ಇವರ ನಮೂನೆ4- ಪ್ರಪತ್ರ ಸಂಖ್ಯೆ:65/2019-20 ದಿ:18/10/2019 & ನಮೂನೆ-2 ಪ್ರಪತ್ರ ಸಂಖ್ಯೆ:40/2016-17 ದಿನಾಂಕ:11/04/2016 | ಮೌಲ್ಯ ಗುರುಕುಲ ಇಂಟರ್ ನ್ಯಾಷನಲ್ ಸ್ಕೂಲ್, ಹೊಂಪಲಘಟ್ಟ, ಆನೇಕಲ್ ತಾಲ್ಲೂಕ್, ಬೆಂಗಳೂರುದ ದಕ್ಷಿಣ ಜಿಲ್ಲೆ | ಆಂಗ್ಲ | 1 ರಿಂದ 8 | ಅನುದಾನ ರಹಿತ *[without Aid]* | 1 ರಿಂದ 8 ನೇ ತ ಉಗತಿಗೆ 2020-21 ನೇ ಸಾಲಿನಿಂದ 2024-25 ನೇ ಸಾಶಲಿನವರೆಗೆ ತಲಾ ಒಂದು ವಿಭಾಗಕ್ಕೆ ಮಾನ್ಯತೆ ನವೀಕರಿಸಿದೆ. | ಶ್ರೀ ಸಾಧಿಕ್ ಅಹಮದ್ ಶಿಕ್ಷಣ ಸಂಯೋಜಕರು ಬಿ.ಇ.ಓ. ಕಛೇರಿ ಆನೇಕಲ್ |
| ಸರ್ಕಾರದ ಆದೇಶ ಸಂಖ್ಯೆ:ಇಡಿ 709 ಪಿಜಿಸಿ 2017 ದಿನಾಂಕ:07/03/2018 ರೂ.5000/- ಪ್ರೋಸೆಸಿಂಗ್ ಶುಲ್ಕವನ್ನು ಎಸ್.ಬಿ.ಐ.-ಆನೇಕಲ್ ಶಾಖೆ, ಚಲನ್ ಸಂಖ್ಯೆ:ಸಿಆರ್:09200202003946ll ದಿನಾಂಕ:23-09-2020 ಪಾವತಿಸಿದ ದಿನಾಂಕ:23-09-2020 | | | | | | |

ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಮಾನ್ಯತೆ ನೀಡಿದೆ.

1. ಕರ್ನಾಟಕ ಶಿಕ್ಷಣ ಕಾಯ್ದೆ 1983 ಕರ್ನಾಟಕ ಆಕ್ಟ್ 1 ಆಫ್ 1995 ರ ನಿಯಮಗಳು ಹಾಗೂ ಸರ್ಕಾರಿ ಮತ್ತು ಇಲಾಖೆಯಿಂದ ಕಾಲಕಾಲಕ್ಕೆ ನೀಡುವ ಸುತ್ತೋಲೆ ಹಾಗೂ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಿರಬೇಕು.
2. ಕರ್ನಾಟಕ ಶಿಕ್ಷಣ ಸಂಸ್ಥೆಗಳು, ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗಧೀಕರಣ ನಿಯಮಾವಳಿಗಳು 1995 ರ ಸರ್ಕಾರಿ ಅಧಿಸೂಚನೆ ಸಂಖ್ಯೆ 116 ವಿವಿಧ 95 ದಿನಾಂಕ: 14-11-95 ರ ನಿಯಮ 4, 5, 6 ಮತ್ತು 8 ರನ್ವಯ ರಾಜ್ಯಪಠ್ಯಕ್ರಮ ಶಾಲಾ ಸುರಕ್ಷತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಹೊಂದಿರತಕ್ಕದ್ದು.
3. ಕರ್ನಾಟಕ ಶಿಕ್ಷಣ ಕಾಯ್ದೆ 1983 ಕರ್ನಾಟಕ ಆಕ್ಟ್ 1 ಆಫ್ 1995 ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು, ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗಧೀಕರಣ ನಿಯಮಾವಳಿಗಳು 1995 ರ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 116 ವಿವಿಧ 95 ದಿನಾಂಕ: 14-11-95 ರ ನಿಯಮ 10 ರಂತೆ ಬೋಧನಾ ಶುಲ್ಕ, ವಿಶೇಷ ಅಭಿವೃದ್ಧಿ ಶುಲ್ಕಗಳನ್ನು ಮಾತ್ರ ವಸೂಲಿ ಮಾಡುತ್ತಿರಬೇಕು ಹಾಗೂ ನಿಯಮ 19 (4) ರಂತೆ ಕ್ರಮವಹಿಸಿರಬೇಕು.
4. ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 41 (5) ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ನಡೆಸಿರಬೇಕು. ಅನುಮತಿ ನೀಡಿದ 5 ವರ್ಷಗಳವರೆಗೆ ಶಾಲಾ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ. ಸಾಮಾನ್ಯವಾಗಿ ಒಂದು ಸಲ ಮಾತ್ರ ಸ್ಥಳಾಂತರಕ್ಕೆ ಮಾತ್ರ ಅವಕಾಶವಿರುತ್ತದೆ. ಒಂದು ವೇಳೆ ಈ ಅವಧಿಯ ನಂತರ ಸ್ಥಳಾಂತರ/ಹಸ್ತಾಂತರ ಮಾಡಿಸಲಿಚ್ಚಿಸಿದಲ್ಲಿ ಹೊಸ ಸ್ಥಳದಲ್ಲಿ ಹೊಸದಾಗಿ ನೊಂದಣಿ ಮಾನ್ಯತೆಯನ್ನು ಪಡೆಯತಕ್ಕದ್ದು.
5. ಕರ್ನಾಟಕ ರಾಜ್ಯದ ಸಂಘದ ನೊಂದಣಿ ಕಾಯ್ದೆ 21 1960 ಕ್ರಮ ಸಂಖ್ಯೆ 9 1957 ಅಧಿನಿಯಮ 13 ರ ಪ್ರಕರಣದಂತೆ ಹಿಂದಿನ ಸಾಲಿನವರೆಗಿನ ಲೆಕ್ಕ ಪತ್ರಗಳನ್ನು (ಮಾರ್ಚ 31 ರವರೆಗೆ) ಸಂಘಗಳ ನೊಂದಣಾಧಿಕಾರಿಗಳಿಗೆ ಸಲ್ಲಿಸಿ ದಾಸ್ತಾವೇಜುಗಳನ್ನು ದಾಖಲು ಪಡಿಸಿರಬೇಕು. ಹಾಗೂ ಸದರಿ ಸಂಸ್ಥೆಯ ಕಾರ್ಯಕಾರಿ ಸಮಿತಿ ಸದಸ್ಯರ ಪಟ್ಟಿಯ ದಾಖಲೆಗಳನ್ನು ಅನುಮೋದಿಸಿಕೊಂಡು ಸ್ವೀಕೃತಿ ಹಾಗೂ ಅನುಮೋದನಾ ಪಟ್ಟಿಯನ್ನು ಪರಿಶೀಲನೆಗೆ ಕಾಯ್ದಿರಿಸಬೇಕು.
6. ಶಿಕ್ಷಣ ಕಾಯ್ದೆ 1983 ಸರ್ಕಾರದ ಅಧಿಸೂಚನೆ ಇಡಿ 131 ವಿವಿಧ 98 ದಿನಾಂಕ: 04-11-99 ರ ಮಾನ್ಯತೆ ನಿಯಮ 1999 ರ ನಿಯಮ 3 ಉಪನಿಯಮ 2 ರಂತೆ ಹಾಗೂ ನಿರ್ದೇಶಕರು ಪ್ರೌಢ ಶಿಕ್ಷಣ ರವರ ಸುತ್ತೋಲೆ ಸಂಖ್ಯೆ: ಸಿ8 (4) (7) ಶಾ.ಶಿ.ಅ.ನಿ.ಅ/01/02-03 ದಿನಾಂಕ : 13-12-02 ರ ನಿಯಮಗಳಂತೆ ಸ್ಥಿರನಿಧಿ ಠೇವಣಿಗಳನ್ನು ನಿಗಧಿಪಡಿಸಿರುವ ದರಗಳಲ್ಲಿ ಆಡಳಿತ ಮಂಡಳಿ ಕಾರ್ಯದರ್ಶಿಗಳು ಹಾಗೂ ಸೂಚಿತ ಅಧಿಕೃತ ಪ್ರಾಧಿಕಾರದ ಜಂಟಿ ಹೆಸರಿನಲ್ಲಿ ನಿರ್ವಹಿಸಿ ಕಾಲಕಾಲಕ್ಕೆ ನವೀಕರಣ ಮಾಡಿಸಿರಬೇಕು.
7. ಸರ್ಕಾರದ ಆದೇಶ ಸಂಖ್ಯೆ: ಇಡಿ 44 ಎಸ್ ಎಲ್ ಬಿ 2007 ದಿನಾಂಕ: 03-09-2007 ರ ಅನುಬಂಧ 3 ರಲ್ಲಿನ ಚೆಕ್‌ಲಿಸ್ಟ್ ನಂತೆ ಎಲ್ಲಾ ಮಾಹಿತಿ ದಾಖಲೆಗಳನ್ನು ಹೊಂದಿರತಕ್ಕದ್ದು ಹಾಗೂ ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿರತಕ್ಕದ್ದು.
8. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 74 ವಿವಿಧ 2004 ಬೆಂಗಳೂರು ದಿನಾಂಕ: 14-08-2006 ರ ಸೂಚನೆಗಳಂತೆ ಲೆಕ್ಕ ಪತ್ರಗಳು, ದಾಖಲೆಗಳನ್ನು ನಿರ್ವಹಿಸಿರಬೇಕು.
9. ಸರ್ಕಾರಿ ಆದೇಶ ಸಂಖ್ಯೆ ಇಡಿ28 ಪಿಜಿಸಿ 1994 ಬೆಂಗಳೂರು ದಿನಾಂಕ: 29-04-1994, ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ165 ಪಿಜಿಸಿ 2004 ದಿನಾಂಕ: 03-01-2005, ಮಾನ್ಯ ಆಯುಕ್ತರ ಸುತ್ತೋಲೆ ಸಂಖ್ಯೆ ಸಿ7(7)ಪ್ರಾಶಿಅ/ಇತರೆ/57/2002-03 ದಿನಾಂಕ: 12-02-2004 ಮತ್ತು 10-02-2005 ಮತ್ತು ಸಿ7(3)ಪ್ರಾಶಿಅ/ನೋಂದಣಿ-132/2005-06 ದಿ: 08-03-2006 ಮತ್ತು ಸರ್ಕಾರದ ಆದೇಶ ಸಂಖ್ಯೆ ಇಡಿ28 ಪಿಜಿಸಿ 94 ಬೆಂಗಳೂರು ದಿನಾಂಕ: 29-04-1994 ಮತ್ತು 30-05-2005, ಸರ್ಕಾರದ ಆದೇಶ ಸಂಖ್ಯೆ : ಇಡಿ 1001 ಡಿಜಿಇ 79 ಬೆಂಗಳೂರು ದಿನಾಂಕ:07-08-2000 ರನ್ವಯ ಭಾಷಾ ನೀತಿಯನ್ನು ಕಡ್ಡಾಯವಾಗಿ ಅನುಸರಿಸಲು ಸೂಚಿಸಿದೆ.
10. ಸರ್ಕಾರಿ ಆದೇಶ ಸಂಖ್ಯೆ ಇಡಿ 113 ಎಸ್.ಇ.ಎಸ್ 2005 ಬೆಂಗಳೂರು, ದಿನಾಂಕ 20ನೇ ಮಾರ್ಚ 2005 ರ ಸೂಚನೆಗಳನ್ವಯ ಸದರಿ ಹೆಚ್ಚುವರಿ ವಿಭಾಗಗಳಿಗೆ ಅನುಗುಣವಾಗಿ ಮೂಲಭೂತ ಸೌಕರ್ಯ, ಶಿಕ್ಷಕರ ನೇಮಕಾತಿ ಹಾಗೂ ಇನ್ನಿತರೆ ಎಲ್ಲಾ ಸೌಲಭ್ಯಗಳನ್ನು ಒದಗಿಸಿರಬೇಕು.
11. ಇಲಾಖಾ ನಿಯಮಾನುಸಾರ ನಿಗಧಿತ ಹಾಗೂ ಅರ್ಹ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡಿರಬೇಕು. ನಿಯಮಾನುಸಾರ ನಿಗದಿತ ಅರ್ಹತೆ ಹೊಂದದೇ ಇರುವ ಶಿಕ್ಷಕರನ್ನೇನಾದರೂ ನೇಮಕಾತಿ ಮಾಡಿಕೊಂಡಿದ್ದಲ್ಲಿ ಕೂಡಲೇ ಕೆಲಸದಿಂದ ತೆಗೆದು ಹಾಕಿ ಅರ್ಹ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ನೇಮಿಸಿಕೊಳ್ಳುವುದು.
12. ಶಾಲೆಯಲ್ಲಿ ನೇಮಕಾತಿ ಮಾಡಿಕೊಳ್ಳುವ ಪ್ರತಿಯೊಬ್ಬ ಬೋಧಕ/ಬೋಧಕೇತರ ಸಿಬ್ಬಂದಿಗೂ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ.104 ಎಸ್.ಇ.ಪಿ.2005 ದಿ. 12-01-2006 ರ ಸೂಚನೆಗಳನ್ವಯ ಸೇವಾ ವಿವರಗಳನ್ನೊಳಗೊಂಡ ಸೇವಾ ವಹಿಗಳನ್ನು ತೆರೆದು ಕಾಲಕಾಲಕ್ಕೆ ನಮೂದನೆಗಳನ್ನು ನಮೂದಿಸಿ ದೃಢೀಕರಿಸಿರುವುದು.

PRINCIPAL
MOULYA GURUKUL INTERNATIONAL SCH
..3, Hompalaghatta Village, Kasaba (Ho), Anek...
BANGALORE-562 106

The Manager
#63/3, Hompalaghatta Kasaba
Hobli, Anekal, Bangalore-562106.
Karnataka

13. ಶಿಕ್ಷಕರಿಗೆ ಸರ್ಕಾರಿ ಆದೇಶಗಳಂತೆ ವೇತನಗಳನ್ನು ಬ್ಯಾಂಕ್ ಉಳಿತಾಯ ಖಾತೆಗಳ ಮೂಲಕ ಪಾವತಿ ಮಾಡುತ್ತಿರುವ ಬಗ್ಗೆ ಹಾಗೂ ಯಾವುದೇ ಕಾರಣಕ್ಕೆ ನಗದು ನೀಡದಿರುವ ಬಗ್ಗೆ ಖಚಿತಪಡಿಸಿಕೊಂಡು ಸೇವಾಬದ್ರತೆ ನೀಡಿರುವ ಬಗ್ಗೆ ವರದಿಯಲ್ಲಿ ನಮೂದಿಸಿದ್ದಾರೆಯೇ?. ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಸಿಬ್ಬಂದಿಯವರಿಗೆ ದಿನಾಂಕ 12.01.2006 ರ ಸರ್ಕಾರದ ಆದೇಶದಂತೆ ಸೇವಾಬದ್ರತೆ ಒದಗಿಸಬೇಕು.
14. ಈ ಶಾಲೆ ಪ್ರಾರಂಭವಾದಗಿನಿಂದ ಸಂಸ್ಥೆ ಹಸ್ತಾಂತರ ಹಾಗೂ ಶಾಲೆ ಸ್ಥಳಾಂತರವಾಗಿದ್ದಲ್ಲಿ ಶಿಕ್ಷಣ ಕಾಯ್ದೆಯನುಸಾರ ಸದರಿ ಶಾಲೆಗೆ ಹೊಸದಾಗಿ ನೋಂದಣಿ ಪ್ರಥಮ ಮಾನ್ಯತೆ ಹಾಗೂ ಕಾಲಕಾಲಕ್ಕೆ ಮಾನ್ಯತೆಗಳನ್ನು ಪಡೆದಿರಬೇಕು.
15. ಪೋಲೀಸ್ ಆಯುಕ್ತರು, ಬೆಂಗಳೂರು ನಗರ, ಇವರ ಆದೇಶ ಸಂಖ್ಯೆ: 157/ ಎಂಎಜಿ (1) ಇತರೆ /2014 ದಿನಾಂಕ: 26-07-2014ರ ಸೂಚನೆಗಳನ್ವಯ ಮಾನ್ಯ ಪೋಲೀಸ್ ಆಯುಕ್ತರು ಶಾಲೆಯಲ್ಲಿ ಮಕ್ಕಳ ಸುರಕ್ಷತಾ ಹಿತದೃಷ್ಟಿಯಿಂದ 09 ಅಂಶಗಳ ಬಗ್ಗೆ ಮಾರ್ಗಸೂಚಿಗಳನ್ನು ಕೈಗೊಳ್ಳಲು ಶಾಲಾ ಆಡಳಿತ ಮಂಡಳಿಗಳಿಗೆ ನೀಡಿರುವ ಸೂಚನೆಗಳನ್ವಯ ಕ್ರಮ ಜರುಗಿಸಿರಬೇಕು.
16. ನಿಯಮಾನುಸಾರ ಎಲ್ಲಾ ರೀತಿಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು.
17. ಆರ್.ಟಿ.ಇ. ಅಡಿಯಲ್ಲಿ ಸದರಿ ಶಾಲೆ ನೋಂದಣಿಯಾಗಿರಬೇಕು.
18. ಶಾಲಾ ಮಕ್ಕಳಿಗೆ ಯಾವುದೇ ದೈಹಿಕ ದಂಡನೆಗಳನ್ನು ನೀಡಬಾರದು.
19. ಅಗ್ನಿನಂದಕಗಳನ್ನು ಅಳವಡಿಸಿರುವ ಬಗ್ಗೆ ಪರಿಶೀಲಿಸಿ ಭೇಟಿ ವರದಿಯಲ್ಲಿ ನಮೂದಿಸತಕ್ಕದ್ದು. ಶಾಲಾ ಕಟ್ಟಡವನ್ನು ಬೆಂಕಿ ಹಾಗೂ ವಿದ್ಯುತ್ ಅವಘಡಗಳಿಂದ ಮುಕ್ತ ಮಾಡಲು ಮುನ್ನೆಚರಿಕೆ ಕ್ರಮ ತೆಗೆದುಕೊಳ್ಳತಕ್ಕದ್ದು ಹಾಗೂ ಅಗ್ನಿ ಶಾಮಕಗಳನ್ನು ಅಳವಡಿಸುವುದು ಮತ್ತು ಕಟ್ಟಡದ ಸುರಕ್ಷತೆಯ ಬಗ್ಗೆ ಸರ್ವೋಚ್ಛ ನ್ಯಾಯಾಲಯದ ಪ್ರಕರಣ ಸಂಖ್ಯೆ-483/04 ದಿನಾಂಕ:13/04/2009 ರಲ್ಲಿ ನೀಡಿರುವ ನಿರ್ದೇಶನಗಳನ್ನು ತಪ್ಪದೆ ಪಾಲಿಸುವುದು.
20. ಶಾಲೆಯ 200 ಮೀಟರ್ ಸುತ್ತಳತೆಯಲ್ಲಿ ಧೂಮಪಾನ ನಿಷೇದ ಪ್ರಕಟಣ ಫಲಕವನ್ನು ಖಡ್ಡಾಯವಾಗಿ ಹಾಕಬೇಕು.
21. ಶಿಕ್ಷಣ ಕಾಯ್ದೆ 1983 ಜಾರಿಗೆ ಬಂದ ಮೇಲೆ ಅಸ್ತಿತ್ವದಲ್ಲಿರುವ ಶಾಲೆಗಳಿಗೆ ನೋಂದಣಿ ಖಡ್ಡಾಯವಾಗಿದ್ದು, ನೋಂದಣಿ ಪಡೆದಿರಬೇಕು.
22. ಶಾಲೆಯಲ್ಲಿ ಶಿಕ್ಷಣ ಸಂಯೋಜಕರ ವರದಿಯನ್ವಯ ತುಂಬಾ ಕಡಿಮೆ ದಾಖಲಾತಿ/ಹಾಜರಾತಿ ಇದ್ದು ಮುಂದಿನ ಶೈಕ್ಷಣಿಕ ವರ್ಷದಲ್ಲಿ ದಾಖಲಾತಿ ಹೆಚ್ಚಿಸಿಕೊಳ್ಳುವುದು. ತಪ್ಪಿದಲ್ಲಿ ಸದರಿ ಆದೇಶವು ತಂತಾನೆ ರದ್ದಾಗುತ್ತದೆ.
23. ಶಾಲಾ ವಾಹನಗಳ ನಿರ್ವಹಣೆಯ ಸಂಬಂದದಲ್ಲಿ ಸಾರಿಗೆ ಇಲಾಖೆರವರು ಹೊರಡಿಸಿರುವ ಆದೇಶದಲ್ಲಿನ ಸೂಚನೆಗಳನ್ನು ಪಾಲಿಸತಕ್ಕದ್ದು.
24. ಶಾಲೆಯ ಮೇಲಿನ ಅಂತಸ್ತುಗಳಿಗೆ ಹೋಗಬೇಕಾದ ಮೆಟ್ಟಿಲುಗಳು ಕಿರಿದು ಆಗಿರಬಾರದು. ಒಂದು ವೇಳೆ ಪ್ರತಿ ಮಹಡಿಗಳಲ್ಲಿ ಸುರಕ್ಷಿತ ಗೋಡೆಗಳನ್ನು ನಿರ್ಮಿಸದಿದ್ದಲ್ಲಿ ಅಥವಾ ತುಂಬಾ ಚಿಕ್ಕದಾದ ಗೋಡೆಗಳನ್ನು ನಿರ್ಮಾಣ ಮಾಡಿದ್ದಲ್ಲಿ ಈ ಬಗ್ಗೆ ಜಾಗರೂಕತಾ ಕ್ರಮ ಕೈಗೊಳ್ಳಬೇಕು. ಕೊನೆಯ ಪಕ್ಷ 5 ಅಡಿ ತಡೆ ಗೋಡೆಗಳು ಇರುವಂತೆ ನೋಡಿಕೊಳ್ಳಬೇಕು. ಗಾಳಿ ಬೆಳಕಿನ ವ್ಯವಸ್ಥೆಗೆ ಅಡ್ಡಿ ಉಂಟಾಗದಂತೆ ಗ್ರಿಲ್‌ಗಳನ್ನು ಅಳವಡಿಸಬೇಕು. ಈ ಮೇಲ್ಕಂಡ ಎಲ್ಲಾ ಷರತ್ತುಗಳನ್ನು ಪಾಲಿಸಿದ್ದಲ್ಲಿ ಮಾತ್ರ ಈ ಮಾನ್ಯತೆ ಅನ್ವಯಿಸುತ್ತದೆ. ತಪ್ಪಿದಲ್ಲಿ ತಂತಾನೆ ರದ್ದಾಗುತ್ತದೆ.
25. 1 ರಿಂದ 5ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಬೋಧನೆ ಮಾಡಲು ಶಿಕ್ಷಕರು ಕಡ್ಡಾಯವಾಗಿ ಖಜಚಿಛಿಜಡಿ ಇಟರಿಬಿಟಿಣಥಿ ಖಿಧಿಣ (ಟಿಇಟಿ) ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. (ದಿನಾಂಕ : 09-06-2014 ರಿಂದ ಜಾರಿಗೆ ಬರುತ್ತದೆ) ಹಾಗೂ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವ ಶಿಕ್ಷಕರನ್ನೇ ಆಡಳಿತ ಮಂಡಳಿಯವರು ನೇಮಕಾತಿ ಮಾಡಿಕೊಳ್ಳತಕ್ಕದ್ದು.
26. ಮಾನ್ಯ ಕರ್ನಾಟಕ ಉಚ್ಚ ನ್ಯಾಯಲಯವು ರಿಟ್ ಅರ್ಜಿ: 14363/94 ಹಾಗೂ ಒಟ್ಟಾಗಿ ಆಲಿಸಲಾದ ಹಲವು ಪ್ರಕರಣಗಳಲ್ಲಿ ದಿ: 02.07.2008 ರಂದು ಹೊರಡಿಸಿರುವ ತೀರ್ಪು, ಮಾನ್ಯ ಸರ್ವೋಚ್ಚ ನ್ಯಾಯಲಯದಲ್ಲಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಎಸ್.ಎಲ್.ಪಿ 18139-18163/2008ನ್ನು ಸಿವಿಲ್ ಅಪೀಲ್ ಎಂದು ಪರಿಗಣಿಸಿ 5166-5190/2013 ಸಂವಿಧಾನ ಪೀಠಕ್ಕೆ ವರ್ಗಾವಣೆಗೊಂಡ ತರುವಾಯದಲ್ಲಿ ದಿ: 06.05.2014 ರಲ್ಲಿ ಹೊರಡಿಸಿರುವ ತೀರ್ಪು, ದಿ: 19.02.2015 ರಂದು ಅಸೋಸಿಯೇಟೆಡ್ ಮೇನೆಜ್‌ಮೆಂಟ್‌ರವರು ದಾಖಲಿಸಿದ್ದ ಅರ್ಜಿಯು ವಿಚಾರಣೆಗೆ ಬಂದು ಅಂತಿಮವಾಗಿ ರಿಟ್ ಅರ್ಜಿ: 55106/2014 ದಿನಾಂಕ: 28.04.2015 ರಂದು ನ್ಯಾಯಲಯವು ಇತ್ಯರ್ಥಪಡಿಸಿದೆ. ಅದರಲ್ಲಿ ದಿ.22.02.2015 ರಂದು ನ್ಯಾಯಲಯ ಹೊರಡಿಸಿದ್ದ ಮಧ್ಯಂತರ ಆದೇಶವನ್ನು ದಿ. 20.05.2015ರ ಒಳಗಾಗಿ ಅನುಷ್ಠಾನಗೊಳಿಸಲು ಸೂಚನೆಯನ್ವಯ ಮತ್ತು ಆಯುಕ್ತರು ಸಾ.ಶಿ.ಇ, ಬೆಂಗಳೂರು ಇವರ ಅಧಿಸೂಚನೆ ದಿನಾಂಕ : 10.04.2015 ಮತ್ತು ಜ್ಞಾಪನ ಪತ್ರ ದಿನಾಂಕ: 16.05.2015 ಗಳಂತೆ 1ರಿಂದ 5ನೇ ತರಗತಿಗೆ ಕನ್ನಡ ಮಾಧ್ಯಮದಲ್ಲಿ ನೋಂದಣಿಯಾಗಿರುವ ಶಾಲೆಗಳು ಆಂಗ್ಲ ಮಾಧ್ಯಮ ಪರಿವರ್ತನೆಗೆ ಅರ್ಜಿಯನ್ನು ಸಲ್ಲಿಸಿ, ಮಾನ್ಯ ಆಯುಕ್ತರಿಂದ ಆದೇಶವಾಗಿರುವ ಶಾಲೆಗಳಾಗಿದ್ದಲ್ಲಿ ಕಂಡಿಕೆ (9)ರ ಷರತ್ತು ಅನ್ವಯಿಸುವುದಿಲ್ಲ.
27. ಕರ್ನಾಟಕ ಶಿಕ್ಷಣ ಸಂಸ್ಥೆಗಳ ನಿಯಮ -2018 ರ ನಿಯಮ 5ಎ ಮತ್ತು ನಿಯಮ -7 ಷೆಡ್ಯೂಲ್ ಪ್ರಕಾರ ಮತ್ತು ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:483/2004 ರನ್ವಯ ಮಕ್ಕಳ ಸುರಕ್ಷತೆ ಕ್ರಮಗಳು , ಕಟ್ಟಡ ಸುರಕ್ಷತೆ, ಅಗ್ನಿ ಸುರಕ್ಷತಾ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಪಡೆಯುವುದು
28. ಶಾಲೆಯ ಎಸ್.ಎ.ಟಿ.ಎಸ್.ನಲ್ಲಿ ಮುಂದಿನ ವರ್ಷಗಳ ಶುಲ್ಕಗಳನ್ನು ಆಡಿಟ್ ವರದಿಯನ್ವಯ ಪ್ರಕಟಿಸುವುದು
29. ಇಲಾಖಾ ನಿಯಮದನ್ವಯ ಕನ್ನಡವನ್ನು ಒಂದು ಭಾಷೆಯನ್ನಾಗಿ [ಪ್ರಥಮ ಅಥವಾ ದ್ವಿತೀಯ] ಕಡ್ಡಾಯವಾಗಿ ಬೋಧಿಸುವುದು.
30. ಕರ್ನಾಟಕ ಶಿಕ್ಷಣ ಸಂಸ್ಥೆಗಳು ಮಾನ್ಯತೆ ನಿಯಮಗಳು 1999 ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 131 ವಿವಿಧ 98 ದಿನಾಂಕ: 04-11-99ರ ನಿಯಮ 4 (ಕ) ರ ಪ್ರಕಾರ ವಿದ್ಯಾರ್ಥಿಗಳ ಕನಿಷ್ಠ ದಾಖಲಾತಿಯನ್ನು ನಿರ್ವಹಿಸಿರಬೇಕು.
31. ಕರ್ನಾಟಕ ಶಿಕ್ಷಣ ಕಾಯ್ದೆಯನ್ವಯ ಎಲ್ಲಾ ಮಾನ್ಯತೆ ನಿಯಮಗಳನ್ನು ಪಾಲಿಸುವುದು ಹಾಗೂ ಯಾವುದೇ ಸುಳ್ಳು ಮಾಹಿತಿಗಳನ್ನು ನೀಡಿರಬಾರದು , ತಪ್ಪಿದಲ್ಲಿ ನಿಯಮಾನುಸಾರ ಮಾನ್ಯತೆಯನ್ನು ಹಿಂತೆಗೆದುಕೊಳ್ಳಲಾಗುವುದು. ನೋಂದಣಿ ಹಾಗೂ ಮಾನ್ಯತೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು.

(ಡಿ.ಆರ್.ರಾಮಮೂರ್ತಿ)
ಕ್ಷೇತ್ರ ಶಿಕ್ಷಣಾಧಿಕಾರಿಗಳು
ಆನೇಕಲ್ ತಾಲ್ಲೂಕು, ಬೆಂ.ದ.ಜಿಲ್ಲೆ

ಪ್ರತಿಯನ್ನು:-

1. ಕಾರ್ಯದರ್ಶಿಗಳು, *ಪ್ರೀಮಿಯರ್ ಲೋಟಸ್ ಫೌಂಡೇಷನ್ , ಸಂಖ್ಯೆ:19, 2 ನೇ ಕ್ರಾಸ್, ಮಾರುತಿ ಲೇಔಟ್, ಬಸ್ವಾಪುರ, ಬೆಂಗಳೂರು*
2. ಮುಖ್ಯ ಶಿಕ್ಷಕರು, ಮೌಲ್ಯ ಗುರುಕುಲ ಇಂಟರ್ ನ್ಯಾಷನಲ್ ಸ್ಕೂಲ್, ಹೊಂಪಘಟ್ಟ, ಆನೇಕಲ್ ತಾಲ್ಲೂಕ್, ಬೆಂಗಳೂರುದ ದಕ್ಷಿಣ ಜಿಲ್ಲೆ
3. ಕಛೇರಿ ಪ್ರತಿ.

PRINCIPAL
MOULYA GURUKUL INTERNATIONAL SCHO[S]
[#]68/3, Hompalaghatta Village, Kasaba (Ho), Anekal (Tq),
BANGALORE-562 106.

The Manager
#68/3, Hompalaghatta Kasaba
Hobli, Anekal, Bangalore-562106.
Karnataka

https://sts.karnataka.gov.in/SCHOOLRR/schoolreg/loadAfter

9 & 10
(wef) 31/may/27
PR

# ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ
## ಆಯುಕ್ತರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ,

**BENGALURU U SOUTH ಜಿಲ್ಲೆ.**

<u>ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಪ್ರಮಾಣ ಪತ್ರ</u>

**ಸಂಖ್ಯೆ: 23696**

**ದಿನಾಂಕ: 17-Aug-2022**

ವಿಷಯ: ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983 ಯೊಂಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **PREMIER LOTUS FOUNDATION** ಆಡಳಿತ ಮಂಡಳಿಯ **29200400904** ಡೈಸ್ ಕೋಡ್ ಸಂಖ್ಯೆ **MOULYA GURUKUL INTERNATIONAL SCHOOL-ANEKAL TOWN ANEKAL** ಶಾಲೆಗೆ [ವಿಳಾಸ], 1 - 10 ತರಗತಿವರೆಗೆ Kannada,English ಮಾಧ್ಯಮ Renewal Recognition ಶಾಲಾ [ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ] ಮಾನ್ಯತೆಯನ್ನು ನವೀಕರಿಸಲು ಆನ್‌ಲೈನ್‌ನಲ್ಲಿ ಸಲ್ಲಿಸಿದ್ದ ಅರ್ಜಿಯನ್ನು ಇಲಾಖೆಯ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ಪರಿಶೀಲನೆ ನಡೆಸಿ, 01-Jun-2022 ರಿಂದ 31-May-2027 ರವರೆಗೆ ಈ ಕೆಳಕಂಡ ಷರತ್ತುಗಳೊಂದಿಗೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ | ವಿವರ | |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | ಆನ್‌ಲೈನ್ ಅರ್ಜಿ ಸಂಖ್ಯೆ :- 23696<br>**PREMIER LOTUS FOUNDATION** |
| 2 | ಶಾಲೆಯ ಹೆಸರು ಮತ್ತು ವಿಳಾಸ | **MOULYA GURUKUL INTERNATIONAL SCHOOL-ANEKAL TOWN ANEKAL** |
| 3 | ಡೈಸ್ ಕೋಡ್ ಸಂಖ್ಯೆ | **29200400904** |
| 4 | ಪ್ರಥಮ ಮಾನ್ಯತೆ / ಮಾನ್ಯತೆ ನವೀಕರಣ ಮಾಡಿದ ಶೈಕ್ಷಣಿಕ ಸಾಲು (ಅವಧಿ) | **2022-2023 ರಿಂದ 2026-2027 ರವರೆಗೆ** |
| 5 | ತರಗತಿ/ ವಿಭಾಗ/ ಮಾಧ್ಯಮ( 1 ರಿಂದ 5, 1 ರಿಂದ 8, 6 ರಿಂದ 8, (1 ರಿಂದ 10 ಅಥವಾ 9 ಮತ್ತು 10 ತರಗತಿಗಳು) | ತರಗತಿ : 9 to 10<br>ತರಗತಿ ವಿಭಾಗಗಳು : 1<br>ಮಾಧ್ಯಮ : English |
| 6 | ಶಾಲೆಯನ್ನು ಅನುದಾನ ಸಹಿತ/ ಅನುದಾನ ರಹಿತ ವಾಗಿ ಪ್ರಥಮ ಮಾನ್ಯತೆ ಮಾನ್ಯತೆ ನವೀಕರಣ ನೀಡಿದೆ | **Pvt. Unaided / Renewal Recognition** |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿದ್ದು, ನೋಂದಾಯಿಸಿದ ಶಾಲೆಯ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. [ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ] 1to 5th [1 ರಿಂದ 5, 1 ರಿಂದ 8, 6 ರಿಂದ 8, 9 ಮತ್ತು 10 ಹಾಗೂ 1 ರಿಂದ 10] ಈ ಶಾಲೆಗಳ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.
2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ-1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.
3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ-2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿರಿಸುವುದು. ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ-ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.
4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಭರಿಸುವ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರಹದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವ ಇಚ್ಛೆಯಿಂದ ನೀಡುವ ದೇಣಿಗೆಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಬಂಧಿಸಿದೆ.
6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.
7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.
8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

T. [signature]

**The Manager**
#68/3, Hompalaghatta Kasaba
Hobli, Anekal, Bangalore-562106.
Karnataka

[signature]

**PRINCIPAL**
**MOULYA GURUKUL INTERNATIONAL SCHOOL**
68/3, Hompalaghatta Village, Kasaba (Ho), Anekal (Tq).
BANGALORE-562 106.

(i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

(ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತರಿತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ-21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯೆಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (PF)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರ ಚೆಕ್ಕುಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆ (ಇSI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್-24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ-17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ಕಂಡಂತೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್‌ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ಪ್ರಾಧಿಕಾರದ ಪಠ್ಯಕ್ರಮ ಮತ್ತು ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳು ಸೆಕ್ಷನ್-19ರಲ್ಲಿ ಸೂಚಿಸಿದಂತೆ ಶಾಲೆಯಲ್ಲಿ ಲಭ್ಯವಿರುವ ಸೌಲಭ್ಯಗಳಿಗೆ ಅನುಗುಣವಾಗಿ ಶಾಲೆಯು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳುವುದು.

13. ಸೆಕ್ಷನ್-19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

14. ಶಾಲೆಯು ಆವರಣದಲ್ಲಿ ಅಥವಾ ಹೊರಗೆ ಅನಧಿಕೃತವಾಗಿ ತರಗತಿ / ವಿಭಾಗಗಳನ್ನು (ಬ್ರಾಂಚ್) ತೆರೆಯಬಾರದು.

15. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

16. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

17. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್‌ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

18. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ-2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

19. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

20. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನು ತಪ್ಪದೇ ಪಾಲಿಸುವುದು.

21. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್‌ನಲ್ಲಿ ಶಾಲಾ ಮಾಹಿತಿಯನ್ನು ನಿಯಮಾನುಸಾರ ಅಪ್‌ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

ಉಪನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
**BENGALURU U SOUTH(2920) ಜಿಲ್ಲೆ**

**1. ಸಂಬಂಧಿಸಿದ ಆಡಳಿತ ಮಂಡಳಿ PREMIER LOTUS FOUNDATION**

**2. ಮುಖ್ಯ ಶಿಕ್ಷಕರು, / ANEKAL TOWN ANEKAL / MOULYA GURUKUL INTERNATIONAL SCHOOL**

**3. ಕ್ಷೇತ್ರ ಶಿಕ್ಷಣಾಧಿಕಾರಿಗಳು, ANEKAL(292004) ತಾಲ್ಲೂಕು/ವಲಯ BENGALURU U SOUTH(2920) ಜಿಲ್ಲೆ.**

**4. ಕಚೇರಿ ಪ್ರತಿ.**

PRINCIPAL
MOULYA GURUKUL INTERNATIONAL SCHOOL
#68/3, Hompalaghatta Village, Kasaba (Ho), Anekal (Tq)
BANGALORE-562 106.

The Manager
#68/3, Hompalaghatta Kasaba
Hobli, Anekal, Bangalore-562106.
Karnataka